ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಸಭಾಧ್ಯಕ್ಷರು

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡಪ್ರಭ

ದಿನಾಂಕ : DATE : 26/3/2021

# ವಿಧಾನಸಭಾ ಕಲಾಪಕ್ಕೆ ಶಾಸಕರ ಗೈರು ಪ್ರಜಾಪ್ರಭುತ್ವಕ್ಕೆ ಮಾರಕ: ಸಭಾಧ್ಯಕ್ಷ

26/3/21

## ಜನರ ಸಮಸ್ಯೆಗಳಿಗೆ ಸ್ಪಂದಿಸುವುದು ಶಾಸಕರ ಜವಾಬ್ದಾರಿ: ವಿಶ್ವೇಶ್ವರ ಹೆಗಡೆ ಕಾಗೇರಿ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಜನರ ಸಮಸ್ಯೆಗೆ ಸ್ಪಂದಿಸುವ ವಿಧಾನಸಭೆಯ ಕಲಾಪಕ್ಕೆ ಶಾಸಕರು ಗೈರು ಹಾಜರಾಗುವ ಪ್ರವೃತ್ತಿ ಹೆಚ್ಚಾಗುತ್ತಿರುವುದು ಪ್ರಜಾಪ್ರಭುತ್ವ ವ್ಯವಸ್ಥೆಗೆ ಮಾರಕ ಎಂದು ಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ಕಳವಳ ವ್ಯಕ್ತಪಡಿಸಿದ್ದಾರೆ.

ವಿಧಾನಸೌಧದಲ್ಲಿ ಗುರುವಾರ ಸುದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜನರ ಸಮಸ್ಯೆಗಳಿಗೆ ಸ್ಪಂದಿಸುವುದು ಶಾಸಕರ ಜವಾಬ್ದಾರಿ. ಸದಸ್ಯರು ತುರ್ತು ಸಂದರ್ಭದಲ್ಲಿ ಗೈರಾಗುವುದು ಬೇರೆ ವಿಚಾರ. ಆದರೆ, ಪ್ರತಿನಿತ್ಯದ ಕಾರ್ಯಕ್ರಮಗಳ ಹೆಸರಲ್ಲಿ ಗೈರಾಗುವುದು ಒಳ್ಳೆಯದಲ್ಲ. ದಿನನಿತ್ಯದ ಕಾರ್ಯಕ್ರಮ ಹೆಸರಲ್ಲಿ ಗೈರು ಹಾಜರಾಗುತ್ತಿರುವುದು ಹೆಚ್ಚಾಗುತ್ತಿದೆ. ಎಲ್ಲರಿಗೂ ಪ್ರತಿನಿತ್ಯ ಕಾರ್ಯಕ್ರಮಗಳು ಇರುತ್ತವೆ. ಅದನ್ನು ಮುಂದಿಟ್ಟುಕೊಂಡು ಸದನಕ್ಕೆ ಗೈರಾಗುವ ಪ್ರವೃತ್ತಿ ಒಳ್ಳೆಯದಲ್ಲ. ಇದು ಪ್ರಜಾತಂತ್ರ ವ್ಯವಸ್ಥೆಯೂ ಮಾರಕವಾಗಿದೆ ಎಂದು ಬೇಸರ ವ್ಯಕ್ತಪಡಿಸಿದರು.

ಸಭಾಧ್ಯಕ್ಷನಾದ ಬಳಿಕ ಸಂಸದೀಯ ವ್ಯವಸ್ಥೆಗಳಿಗೆ ಮೌಲ್ಯ ತುಂಬುವ ಪ್ರಯತ್ನ ಮಾಡಿದ್ದೇನೆ. ಸಚಿವರು, ಶಾಸಕರು ಪಾಲ್ಗೊಳ್ಳುವಿಕೆ ಗಮನಿಸಿದಾಗ ಅವರು ಇನ್ನೂ ಉತ್ತಮವಾಗಿ ಸ್ಪಂದಿಸಬಹುದಿತ್ತು. ಸಚಿವರು, ಶಾಸಕರು, ಅಧಿಕಾರಿಗಳಿಗೆಸ್ವಯಂ ಜಾಗೃತಿ ಮೂಡಬೇಕು. ಆಗ ಮಾತ್ರ ಕಲಾಪಕ್ಕೆ ಅರ್ಥ ಬರಲಿದೆ ಎಂದು ಕಾಗೇರಿ ಅಭಿಪ್ರಾಯಪಟ್ಟರು.

ಪ್ರತಿಪಕ್ಷಗಳ ನಡೆಯ ಬಗ್ಗೆಯೂ ತೀವ್ರ ಅಸಮಾಧಾನ ವ್ಯಕ್ತಪಡಿಸಿದ ಸಭಾಧ್ಯಕ್ಷರು, ಪ್ರತಿಪಕ್ಷಗಳು ಕಲಾಪಕ್ಕೆ ಅಡ್ಡಿಪಡಿಸುವುದು ಸರಿಯಲ್ಲ. ಸದನವನ್ನು ರಾಜಕೀಯ ವೇದಿಕೆಯಾಗಿ ಮಾಡುವ ಮನಸ್ಥಿತಿಯಿಂದ ಹೊರಬರಬೇಕು. ಸದನದ ಹೊರಗಡೆ ರಾಜಕೀಯ ಚಟುವಟಿಕೆಯನ್ನು ತಮ್ಮ ಇಚ್ಛೆಗೆ ತಕ್ಕಂತೆ ನಡೆಸಿಕೊಳ್ಳಬಹುದು. ಆದರೆ, ಸದನದೊಳಗೆ ಚರ್ಚೆ, ಸಂವಾದ, ತರ್ಕಕ್ಕೆ ಇರುವಂತಹ ಅವಕಾಶಗಳನ್ನು ಮೊಟಕುಗೊಳಿಸುವುದು ಯಾರಿಂದಲೂ ಆಗಬಾರದು. ಆ ರೀತಿಯಾಗದಂತೆ ನೋಡಿಕೊಳ್ಳುವ ಹೊಣೆಗಾರಿಕೆ ಪ್ರತಿಪಕ್ಷದ ಮೇಲಿರುತ್ತದೆ. ಬಜೆಟ್ ಅಧಿವೇಶನದಲ್ಲಿ ಪ್ರತಿಪಕ್ಷದ ಪಾತ್ರ ಅತ್ಯಂತ ನೋವು ತಂದಿದೆ. ಆಡಳಿತ ಪಕ್ಷದ ಸಭಾನಾಯಕರಿಗೆ ಇರುವಷ್ಟೇ ಜವಾಬ್ದಾರಿಯೂ ಪ್ರತಿಪಕ್ಷಕ್ಕೂ ಇರುತ್ತದೆ. ಸಂಸದೀಯ ವ್ಯವಸ್ಥೆಗೆ ಬಲ ಬರಬೇಕಾದರೆ ಪ್ರತಿಪಕ್ಷವೂ ಜವಾಬ್ದಾರಿಯುತವಾಗಿ ನಡೆದುಕೊಳ್ಳಬೇಕು ಎಂದರು.

## ಸುಧಾಕರ್ ಹೇಳಿಕೆ ಪರಿಶೀಲನೆ: ಸ್ಪೀಕರ್



ಆರೋಗ್ಯ ಸಚಿವ ಡಾ। ಕೆ.ಸುಧಾಕರ್ ಆಕ್ಷೇಪಾರ್ಹ ಹೇಳಿಕೆ ಸರಿಯಲ್ಲ. ಈ ಸಂಬಂಧ ಕಾಂಗ್ರೆಸ್ ನಿಯೋಗ ಪತ್ರ ಬರೆದಿದ್ದು, ಈ ನಿಟ್ಟಿನಲ್ಲಿ ಏನು ಮಾಡಬೇಕು ಎಂಬುದರ ಬಗ್ಗೆ ಪರಿಶೀಲನೆ ನಡೆಸುತ್ತೇನೆ ಎಂದು ಸಭಾಧ್ಯಕ್ಷ ಕಾಗೇರಿ ತಿಳಿಸಿದ್ದಾರೆ. ಸುಧಾಕರ್ ಸಹ ತಮ್ಮ ಹೇಳಿಕೆ ಬಗ್ಗೆ ಸ್ಪಷ್ಟೀಕರಣ ನೀಡಿದ್ದಾರೆ. ಅವರು ಸ್ಪಷ್ಟೀಕರಣವನ್ನೂ ಪರಿಗಣಿಸಲಾಗುವುದು. ನನಗೆ ಯಾವ ರೀತಿಯ ಕ್ರಮ ಕೈಗೊಳ್ಳುವ ಅವಕಾಶ ಇದೆ ಎಂಬುದರ ಬಗ್ಗೆ ಪರಿಶೀಲನೆ ನಡೆಸಲಾಗುವುದು. ಸಂಸದೀಯ ವ್ಯವಸ್ಥೆಯಡಿ, ಒಂದು ಚೌಕಟ್ಟಿನಲ್ಲಿ ನಾನು ಏನು ಕ್ರಮ ತೆಗೆದುಕೊಳ್ಳಬೇಕೋ ಅದನ್ನು ತೆಗೆದುಕೊಳ್ಳುತ್ತೇನೆ ಎಂದರು.